# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 655

ಸದಸ್ಯರ ಹೆಸರು : ಶ್ರೀ ಕೆ.ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 17-09-2021

ಉತ್ತರಿಸುವ ಮಾನ್ಯ ಸಚಿವರು : ಕೃಷಿ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಫಸಲ್ ಭೀಮಾ ಯೋಜನೆಯಡಿ ಕೇಂದ್ರ ಸರ್ಕಾರದ ವತಿಯಿಂದ ವಿಮೆ; ಪಾವತಿಸಿದ ರೈತರಿಗೆ ಬೆಳೆ ಹಾನಿಯಿಂದ ನಷ್ಟ ಉಂಟಾದ ಸಂದರ್ಭದಲ್ಲಿ ಬೆಳೆ ವಿಮೆ ಪರಿಹಾರ ನೀಡುವಲ್ಲಿ ಆಗುತ್ತಿರುವ ನಿಧಾನಗತಿ/ತೊಂದರೆ ಹಾಗೂ ವಿಳಂಬದಿಂದ ರೈತರು ಸಂಕಷ್ಟಕ್ಕೆ ಸಿಲುಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಫಸಲ್ ಭೀಮಾ ಯೋಜನೆಯಡಿ ಬೆಳೆ ವಿಮೆ ನಷ್ಟ ಪರಿಹಾರವನ್ನು ಲೆಕ್ಕಾಚಾರ ಮಾಡಿದ ನಂತರ ಬೆಳೆ ಸಮೀಕ್ಷೆ ವರದಿಯೊಂದಿಗೆ ತಾಳೆ ಮಾಡಿ, ಬೆಳೆ ತಾಳೆಯಾದ ಅರ್ಹ ಫಲಾನುಭವಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಸಂರಕ್ಷಣೆ ತಂತ್ರಾಂಶದ ಮುಖಾಂತರ ಬೆಳೆ ನಷ್ಟ ಪರಿಹಾರ ಮೊತ್ತವನ್ನು ವರ್ಗಾವಣೆ (Direct Beneficiary Transfer) ಮಾಡಲಾಗುತ್ತಿದೆ.<br><br>ರೈತರ ಬ್ಯಾಂಕ್ ಖಾತೆಯ ವಿವರ ಸರಿಯಾಗಿ ಸಲ್ಲಿಸದೇ ಇದ್ದಲ್ಲಿ ಅಥವಾ ಬ್ಯಾಂಕ್ ಖಾತೆಯ ಸಂಖ್ಯೆಯನ್ನು ಆಧಾರ್‌ನೊಂದಿಗೆ ಜೋಡಣೆಯಾಗದಿದ್ದಲ್ಲಿ ಮಾತ್ರ ವಿಳಂಬವಾಗುತ್ತಿರುತ್ತದೆ. |
| ಆ) | ಬಂದಿದ್ದಲ್ಲಿ; ಸರ್ಕಾರ ಕೈಗೊಂಡ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | 2019-20ನೇ ಸಾಲಿನಿಂದ ಪ್ರಥಮ ಬಾರಿಗೆ ಸಂರಕ್ಷಣೆ ತಂತ್ರಾಂಶದ ಮುಖಾಂತರವೇ ವಿಮಾ ಸಂಸ್ಥೆಯವರಿಂದ ಬೆಳೆ ವಿಮೆ ಪರಿಹಾರ ಮೊತ್ತವನ್ನು ರೈತರ ಬ್ಯಾಂಕ್ ಖಾತೆಗೆ ನೇರವಾಗಿ ವರ್ಗಾವಣೆ (Direct Beneficiary Transfer) ಮಾಡಲಾಗುತ್ತಿದೆ. ಈ ರೀತಿಯಾಗಿ ಅರ್ಹ ಫಲಾನುಭವಿಗಳಿಗೆ ಬೆಳೆ ವಿಮೆ ಪರಿಹಾರ ಮೊತ್ತವನ್ನು ಇತ್ಯರ್ಥಪಡಿಸುವುದರಿಂದ ಪಾರದರ್ಶಕತೆ ಮತ್ತು ನೈಜ ಸಮಯ ಪಾವತಿಯ ಸ್ಥಿತಿಗತಿ ದೊರಕುತ್ತದೆ.<br><br>ರೈತ ಫಲಾನುಭವಿಗಳ ಆಧಾರ್ ಸಂಖ್ಯೆ ಬ್ಯಾಂಕ್ ಖಾತೆಗೆ ಲಿಂಕ್ ಆಗದೆ ಇರುವ/ಖಾತೆಗೆ ನಿಗದಿಪಡಿಸಿರುವ ಗರಿಷ್ಠ ಕ್ರೆಡಿಟ್ ಮಿತಿಯನ್ನು ಮೀರಿರುವ/ನಿರ್ಬಂಧಿತ ಅಥವಾ ಫ್ರೋಜನ್ ಖಾತೆ/ನಿಷ್ಕ್ರಿಯ ಆಧಾರ್/ಎನ್.ಪಿ.ಸಿ.ಐ. ನಿಂದ ತಿರಸ್ಕೃತ, ಈ ಎಲ್ಲಾ ಕಾರಣಗಳಿಂದಾಗಿ, ವಿಮೆ ಕಂಪನಿಗಳು |

| | | |
|---|---|---|
| | | ರೈತರಿಗೆ ಬೆಳೆ ವಿಮೆ ಪಾವತಿಸುವಲ್ಲಿ ವಿಳಂಬವಾಗುತ್ತಿದೆ. ಈ ಕುರಿತು ರೈತರಿಗೆ ಆಧಾರ್ ಸಂಖ್ಯೆಯನ್ನು ಬ್ಯಾಂಕ್ ಖಾತೆಯೊಂದಿಗೆ ಜೋಡಣೆ ಮಾಡಲು ಹಾಗೂ ಆಧಾರ್ ವಿವರಗಳನ್ನು ಇಂದೀಕರಿಸುವಂತೆ ಪ್ರಚಾರ ಮಾಡಲಾಗುತ್ತಿದೆ.<br><br>ಪ್ರತಿ ಹಂಗಾಮಿನಲ್ಲಿ ಸಂರಕ್ಷಣೆ ತಂತ್ರಾಂಶದಲ್ಲಿ ಕ್ಲೇಮು ಲೆಕ್ಕಾಚಾರ ಮಾಡಿದ ನಂತರ ವಿಳಂಬ ಮಾಡದೆ ಬೆಳೆ ವಿಮೆ ಪರಿಹಾರವನ್ನು ಸಂರಕ್ಷಣೆ ತಂತ್ರಾಂಶದ ಮುಖಾಂತರ ಇತ್ಯರ್ಥಪಡಿಸುವಂತೆ ವಿಮಾ ಸಂಸ್ಥೆಯವರಿಗೆ ನಿರ್ದೇಶನ ನೀಡಲಾಗಿದ್ದು, ಅದರಂತೆ ಕ್ರಮವಹಿಸಲಾಗಿದೆ. |
| ಇ) | ರಾಜ್ಯದಲ್ಲಿ 2019-20, 2020-21ನೇ ಸಾಲಿನಲ್ಲಿ ಬೆಳೆ ವಿಮೆ ಪರಿಹಾರ ಯೋಜನೆಯಡಿಯಲ್ಲಿ ಬೆಳೆ ಪರಿಹಾರ ಪಡೆದ ರೈತರ ಸಂಖ್ಯೆ ಎಷ್ಟು? (ಅಂಕಿ ಅಂಶಗಳೊಂದಿಗೆ ಮಾಹಿತಿ ಒದಗಿಸುವುದು) | ರಾಜ್ಯದಲ್ಲಿ 2019-20, 2020-21ನೇ ಸಾಲಿನಲ್ಲಿ ಬೆಳೆ ವಿಮೆ ಪರಿಹಾರ ಯೋಜನೆಯಡಿಯಲ್ಲಿ ಬೆಳೆ ಪರಿಹಾರ ಪಡೆದ ರೈತರ ವಿವರ ಈ ಕೆಳಗಿನಂತಿದೆ. |

| ವರ್ಷ | ಪರಿಹಾರ ಪಡೆದ ರೈತ ಫಲಾನುಭವಿಗಳ ಸಂಖ್ಯೆ |
|---|---|
| 2019-20 | 6,48,220 |
| 2020-21 | 3,50,456 |
| **ಒಟ್ಟು** | **9,98,676** |

ಸಂಖ್ಯೆ: ಕೃಇ 103 ಕೃಕೈಉ 2021

(ಬಿ.ಸಿ.ಪಾಟೀಲ್)
ಕೃಷಿ ಸಚಿವರು